**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ಬಂಗಾರಪೇಟೆ**

**ಸಿಸಿ ಸಂಖ್ಯೆ: 685/2023**

**ಚಾಸಾಃ 18 ಪ್ರಾಸಾಃ 5**

**ಸಾಕ್ಷಿಯನ್ನು ದಿಃ 04-06-2026 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

| | |
|---|---|
| ಹೆಸರುಃ | ಸಂಜೀವರಾಯಪ್ಪ ಟಿ |
| ತಂದೆ ಹೆಸರುಃ | ತಿಪ್ಪಯ್ಯ |
| ವಯಸ್ಸುಃ | 48 |
| ವೃತ್ತಿಃ | ಪಿಐ |
| ವಾಸ ಸ್ಥಳಃ | ಬೆಂಗಳೂರು |

**ಮುಖ್ಯ ವಿಚಾರಣೆಃ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

ನಾನು 2022 - 2023 ನೇ ಸಾಲಿನಲ್ಲಿ ಬಂಗಾರಪೇಟೆ ಪೊಲೀಸ್ ಠಾಣೆಯಲ್ಲಿ ಪಿಐ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿನಾಂಕಃ 1-01-2023 ರಂದು ಪ್ರಸ್ತುತ ಕಡತವನ್ನು ಚಾಸಾ-17 ರವರಿಂದ ಪಡೆದು ಮುಂದುವರೆಸಿರುತ್ತೇನೆ. ಅದೇ ದಿನ 03.30 ಗಂಟೆಗೆ ಘಟನ ಸ್ಥಳಕ್ಕೆ ಭೇಟಿ ನೀಡಿ ಚಾಸಾ-11 ಮತ್ತು 12 ರವರ ಸಮಕ್ಷಮ ಘಟನ ಸ್ಥಳದ ಪಂಚನಾಮೆ ಜರುಗಿಸಿ ಕಚ್ಚಾ ನಕಾಶೆ ತಯಾರಿಸಿರುತ್ತೇನೆ. ಅದೇ ದಿನದಂದು 04-30 ಗಂಟೆಗೆ ಬಂಗಾರಪೇಟೆ ಆಸ್ಪತ್ರೆಯ ಶವಗಾರಕ್ಕೆ ಭೇೀಟಿ ನೀಡಿ ಪಂಚರಾದ ಚಾಸಾ-5 ರಿಂದ 7 ರವರ ಸಮಕ್ಷಮ ಶವ ತನಿಖಾ ಪಂಚನಾಮೆಯನ್ನು ಜರುಗಿಸಿರುತ್ತೇನೆ. ನಂತರ ಚಾಸಾ-9 ಮತ್ತು 10 ಸಾಕ್ಷಿದಾರರ ಹೇಳಿಕೆಗಳನ್ನು ಪಡೆದುಕೊಂಡಿರುತ್ತೇನೆ.

ಅದೇ ದಿನ ಪಿಎಂ ಜರುಗಿಸಲು ವೈದ್ಯಾಧಿಕಾರಿಗಳಿಗೆ ಪತ್ರ ಬರೆದಿರುತ್ತೇನೆ. ನಂತರ ಶವವನ್ನು ಸಂಬಂಧಿಕರಿಗೆ ಹಸ್ತಾಂತರಿಸಿ ಅದಕ್ಕೆ ಸಂಬಂಧಪಟ್ಟಂತೆ ಸ್ವೀಕೃತಿ ಪಡೆದುಕೊಂಡಿರುತ್ತೇನೆ. 02-01-2023 ರಂದು ಚಾಸಾ-15 ರವರಿಗೆ 133 ನೋಟೀಸು ಜಾರಿ ಮಾಡಿ ಸೂಕ್ತ ಮಾಹಿತಿ ಹಾಗೂ

ದಾಖಲಾತಿಗಳನ್ನು ಪಡೆದುಕೊಂಡಿರುತ್ತೇನೆ. ಅದೇ ದಿನದಂದು ಚಾಸಾ-1 ರವರಿಗೆ 133 ನೋಟೀಸು ಜಾರಿ ಮಾಡಿ ಸೂಕ್ತ ಮಾಹಿತಿ ಪಡೆದುಕೊಂಡಿರುತ್ತೇನೆ. ಅಪಘಾತರದಲ್ಲಿ ಭಾಗಿಯಾಗಿರುವ ವಾಹನಗಳನ್ನು ತಪಾಸಣೆ ಮಾಡಿಸಲು ಐಎಂವಿ ಅಧಿಕಾರಿಗಳಿಗೆ ಪತ್ರ ಬರೆದಿರುತ್ತೇನೆ. ಅದೇ ದಿನ ಚಾಸಾ-1, 2 4 ರವರ ಹೇಳಿಕೆ ಪಡೆದುಕೊಂಡಿರುತ್ತೇನೆ. ದಿಃ 03-01-2023 ರಂದು ಐಎಂವಿ ವರದಿ ಆರ್ ಟಿ ಒ ರವರಿಂದ ಪಡೆದುಕೊಂಡು ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ. ಚಾಸಾ-1 ರವರಿಗೆ ದ್ವಿಚಕ್ರ ವಾಹನವನ್ನು ಇನ್ ಡೆಮ್ ನಿಟಿ ಬಾಂಡ್ ಪಡೆದುಕೊಂಡು ವಾಹನ ಹಿಂತಿರುಗಿಸಿರುತ್ತೇನೆ. ದಿಃ 06-01-2023 ರಂದು ಪಪಿಎಂ ವರದಿ ಪಡೆದುಕೊಂಡು ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ. ದಿಃ 04-01-2023 ರಂದು ತನಿಖೆ ಪೂರೈಸಿ ಆರೋಪಿಯ ವಿರುದ್ಧ ಅಂತಿಮ ವರದಿ ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ.

ಸಾಕ್ಷಿಯು ನಿಪಿ-2 ಹಾಗೂ ಅದರಲ್ಲಿರುವ ಸಹಿಯನ್ನು ನೋಡಿ ಗುರುತಿಸಿದ್ದು ಸಹಿಯನ್ನು ನಿಪಿ-2(ಬಿ) ಎಂದು ಗುರುತಿಸಲಾಯಿತು. ಸಾಕ್ಷಿಯು ನಿಪಿ-3 ನ್ನು ಹಾಗೂ ಅದರಲ್ಲಿರುವ ಸಹಿಯನ್ನು ನೋಡಿ ಗುರುತಿಸಿದ್ದು ಸಹಿಯನ್ನು ನಿಪಿ-3(ಬಿ) ಎಂದು ಗುರುತಿಸಲಾಯಿತು. ಸಾಕ್ಷಿಯು ಶವತನಿಖಾ ವರದಿಯನ್ನು ಹಾಗೂ ಅದರಲ್ಲಿರುವ ಸಹಿಯನ್ನು ನೋಡಿ ಗುರುತಿಸಿದ್ದು ಸದರಿ ದಾಖಲಾತಿಯನ್ನು ನಿಪಿ-8 ಎಂದು, ಸಾಕ್ಷಿ ಸಹಿಯನ್ನು ನಿಪಿ-8(ಎ) ಎಂದು ಗುರುತಿಸಲಾಯಿತು. ಸಾಕ್ಷಿಯು ಘಟನ ಸ್ಥಳದ ಪಂಚನಾಮೆ ಕಾಲಕ್ಕೆ ತಯಾರಿಸಿರುವ ಕಚ್ಚಾ ನಕಾಶೆ ಹಾಗೂ ಅದರಲ್ಲಿರುವ ಸಹಿಯನ್ನು ನೋಡಿ ಗುರುತಿಸಿದ್ದು, ನಕಾಶೆಯನ್ನು ನಿಪಿ-9 ಎಂದು, ಸಹಿಯನ್ನು ನಿಪಿ-9(ಎ} ಎಂದು ಗುರುತಿಸಲಾಯಿತು. ಸಾಕ್ಷಿಯು ಪಿಎಂ ವರದಿ ಹಾಗೂ ಅದರಲ್ಲಿರುವ ಸಹಿಯನ್ನು ನೋಡಿ ಗುರುತಿಸಿದ್ದು ಸಹಿಯನ್ನು ನಿಪಿ-10(ಎ) ಎಂದು ಗುರುತಿಸಲಾಯಿತು. ಸಾಕ್ಷಿಯು ಐಎಂವಿ ವರದಿ ಹಾಗೂ ಅದರಲ್ಲಿರುವ ಸಹಿಯನ್ನು ನೋಡಿ ಗುರುತಿಸಿದ್ದು ಐಎಂವಿ ವರದಿಯನ್ನು ನಿಪಿ-11 ಎಂದು, ಸಾಕ್ಷಿ ಸಹಿಯನ್ನು ನಿಪಿ-11(ಎ) ಎಂದು ಗುರುತಿಸಲಾಯಿತು. ದಿಃ 03-01-2023 ರ ಇನ್ಡೆಮ್ನಿಟಿ ಬಾಡನ್ನು ಹಾಗೂ ಅದರಲ್ಲಿರುವ

ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ–12 ಎಂದು, ಸಾಕ್ಷಿ ಸಹಿಯನ್ನು ನಿಪಿ–12(ಎ) ಎಂದು ಗುರುತಿಸಲಾಯಿತು. ದಿಃ 02-01-2023 ರಂದು ಕೆಎಸ್.ಆರ್.ಟಿ.ಸಿ ಕೋಲಾರ ವಿಭಾಗದಿಂದ ಪಡೆದುಕೊಂಡಿರುವ ಪತ್ರ ಹಾಗೂ ಲಗತ್ತುಗಳನ್ನು ನೋಡಿ ಸಾಕ್ಷಿಯು ಅದರಲ್ಲಿರುವ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ–13 ಹಾಗೂ ಸಾಕ್ಷಿಯ ಸಹಿಯನ್ನು ನಿಪಿ–13(ಎ) ಎಂದು ಗುರುತಿಸಲಾಯಿತು. ಸಾಕ್ಷಿಯು ಭಾವಚಿತ್ರವನ್ನು ಹಾಗೂ ಆರೋಪಿಯನ್ನು ನೋಡಿ ಗುರುತಿಸಿರುತ್ತಾರೆ.

**ಪಾಟೀ ಸವಾಲುಃ ಆರೋಪಿ ಪರ ಶ್ರೀ ಆರ್ ಎಂ ಎಸ್ ವಕೀಲರಿಂದ**

ನಾನು ಯಾವುದೇ ಕಾಲಕ್ಕೂ ಘಟನೆ ಸ್ಥಳಕ್ಕೆ ಭೇಟಿ ನೀಡಿರುವುದಿಲ್ಲ ಎಂದರೆ ಸರಿಯಲ್ಲ, ಘಟನ ಸ್ಥಳದಲ್ಲಿ ಪಂಚರ ಸಮಕ್ಷಮ ಪಂಚನಾಮೆ ಜರುಗಿಸಿರುತ್ತೇನೆ ಅಂತ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ, ಅದೇ ರೀತಿ ಪಂಚರ ಸಮಕ್ಷಮ ಶವ ಪಂಚನಾಮೆ ಜರುಗಿಸಿರುತ್ತೇನೆ ಅಂತ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂಂದರೆ ಸರಿಯಲ್ಲ. ಚಾಸಾ–1 ರವರಿಗೆ ಅನುಕೂಲವಾಗುವಂತೆ ಸುಳ್ಳು ಐಎಂವಿ ವರದಿಯನ್ನು ಯಾವುದೇ ರೀತಿ ಪರಿಶೀಲನೆಗೆ ಒಳಪಡಿಸದೇ ದಾಖಾಲತಿಯನ್ನು ನಾವೇ ಸೃಷ್ಟಿ ಮಾಡಿರುತ್ತೇವೆ ಎಂದರೆ ಸರಿಯಲ್ಲ. ಪ್ರಸ್ತುತ ಪ್ರಕರಣದಲ್ಲಿ ಯಾವ ಕಾಲಕ್ಕೂ ನಾನು ಸಾಕ್ಷಿದಾರರ ಹೇಳಿಕೆಗಳನ್ನು ಪಡೆದುಕೊಳ್ಳದೇ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ಪಿಡಬ್ಲ್ಯೂಡಿ ರವರಿಗೆ ಪತ್ರ ಬರೆದು ಅವರಿಂದ ನಕಾಶೆ ಪಡೆದುಕೊಂಡಿರುತ್ತೇನೆ ಅಂತ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ, ಸದರಿ ಪ್ರಕರಣದಲ್ಲಿ ಬ್ಲಡ್ ಸ್ಯಾಂಪಲನ್ನು ಎಫ್ ಎಸ್ ಎಲ್–ಗೆ ಕಳುಹಿಸಿ ಅಲ್ಲಿಂದ ವರದಿಯನ್ನು ಪಡೆದುಕೊಂಡಿರುತ್ತೇನೆ ಅಂತ ಸುಳ್ಳು ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ ಪ್ರಸ್ತುತ ಪ್ರಕರಣದಲ್ಲಿ ಎಫ್ ಎಸ್ ಎಲ್ ವರದಿಯನ್ನು ಪಡೆದುಕೊಂಡಿರುತ್ತೇನೆ ಅಂತ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ, ಎಲ್ಲಾ ತನಿಖೆಯನ್ನು ಹಾಗೂ ಎಲ್ಲಾ ದಾಖಲಾತಿಗಳನ್ನು ಠಾಣೆಯಲ್ಲಿ ಸೃಷ್ಟಿ ಮಾಡಿ ಮಾನ್ಯ ನ್ಯಾಯಾಲಯಕ್ಕೆ ಹಾಜರು ಮಾಡಿ ಈಗ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನನ್ನ ತನಿಖಾ ಅವಧಿಯಲ್ಲಿ

ಆರೋಪಿ ಯಾವುದೇ ತಪ್ಪು ಮಾಡದೇ ಇದ್ದರೂ ಕೂಡ ಆರೋಪಿ ವಿರುದ್ಧ ಸುಳ್ಳು ಅಂತಿಮ ವರದಿ ಸಲ್ಲಿಸಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇರುವುದಿಲ್ಲ**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆ ಮೇರೆಗೆ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸರಿ ಇದೆ.

**(ಸುಕೀತಾ ಎಸ್ ಹದ್ಲಿ)**
ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ, ಬಂಗಾರಪೇಟೆ

**<u>ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ಬಂಗಾರಪೇಟೆ</u>**

**<u>ಸಿಸಿ ಸಂಖ್ಯೆ:</u>** 685/2023

**ಚಾಸಾಃ 2 ಪ್ರಾಸಾಃ 6**

**<u>ಸಾಕ್ಷಿಯನ್ನು ದಿಃ 04.06.2026 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.</u>**

| | |
|---|---|
| ಹೆಸರುಃ | ಯಾಸಿನ್ ಪಾಷ |
| ತಂದೆ ಹೆಸರುಃ | ಚೋಟು ಸಾಬ್ |
| ವಯಸ್ಸುಃ | 55 |
| ವೃತ್ತಿಃ | ವ್ಯವಸಾಯ |
| ವಾಸ ಸ್ಥಳಃ | ವಟ್ರಗುಂಟೆ |

**<u>ಮುಖ್ಯ ವಿಚಾರಣೆಃ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ</u>**

ಚಾಸಾ-1 ರವರು ನನ್ನ ತಂಗಿ. ಮೃತ ಶೇಕ್ ಅಹಮದ್ ನನ್ನ ಮಾವನಾಗಬೇಕು, ಸದರಿಯವರು 2023 ರಲ್ಲಿ ಅಪಘಾತದಲ್ಲಿ ತೀರಿಕೊಂಡಿರುತ್ತಾರೆ. ಅಪಘಾತವು ಯಾವ ರೀತಿ ಹಾಗೂ ಯಾರ ತಪ್ಪಿನಿಂದ ಆಗಿರುತ್ತದೆ ಎಂದು ನನಗೆ ಗೊತ್ತಿರುವುದಿಲ್ಲ. ಶೇಕ್ ಅಹಮದ್ ರವರು ಆಸ್ಪತ್ರೆಯಲ್ಲಿ ದಾಖಲಾದಾಗ ಹೋಗಿ ನೋಡಿರುತ್ತೇನೆ. ಇಷ್ಟನ್ನು ಹೊರತುಪಡಿಸಿ ಬೇರೇನೂ ಗೊತ್ತಿಲ್ಲ. ಪೊಲೀಸರು ಸಹಿ ಹಾಕಲು ಹೇಳಿದ ಕಾರಣದಿಂದಾಗಿ ಸಹಿ ಹಾಕಿರುತ್ತೇನೆ.

(ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಬೇಕೆಂದು ಎ.ಪಿ.ಪಿ.ರವರು ಕೋರಿರುತ್ತಾರೆ. ಅದರಂತೆ ಅನುಮತಿ ನೀಡಿದೆ.)

**<u>ಪಾಟೀ ಸವಾಲುಃ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ</u>**

ದಿನಾಂಕ 01-01-2023 ರಂದು ಮಧ್ಯಾಹ್ನ 01-30 ಸಮಯದಲ್ಲಿ ನಾನು ಜೋಲಾರ ಕೆಜಿಎಫ್ ಮುಖ್ಯ ರಸ್ತೆಯಲ್ಲಿ ಮನೆಗೆ ವಾಪಸ್ತು ಹೋಗಲು ಎಸ್ ಎನ್ ಸಿಟಿ ಮುಂಭಾಗದಲ್ಲಿ ಹೋಗುತ್ತಿದ್ದಾಗ ಕೋಲಾರದ ಕಡೆಯಿಂದ ಬರುತ್ತಿದ್ದ ಬಸ್ಸೊಂದು ಅದರ ಮುಂದೆ ಬರುತ್ತಿದ್ದ ದ್ವಿಚಕ್ರ ವಾಹನಕ್ಕೆ ಡಿಕ್ಕಿ ಹೊಡೆದು ಅದನ್ನು ನೋಡಿ ಅಲ್ಲಿ ಹೋದಾಗ ಅಪಘಾತವು ನನ್ನ ತಂಗಿಯ ಗಂಡನಾದ ಶೇಕ್ ಅಹಮದ್ ಗೆ ಆಗಿರುತ್ತದೆ ಅಂತ ತಿಳಿದುಬಂದಿರುತ್ತದೆ ಎಂದರೆ ಸರಿಯಲ್ಲ. ಶೇಕ್ ಅಹಮದ್

ರವರು ಟಿವಿಎಸ್ ಎಕ್ಸೆಲ್ 100 ಹೆವಿ ಡ್ಯೂಟಿ ವಾಹನ ಸಂಖೆಉ ಕೆಎ 08–ಇಎ– 4079 ಚಲಾಯಿಸಿಕೊಂಡು ಕೆಜಿಎಫ್ ಗೆ ಬರಲು ಕೊಲಾರ ಕೆಜಿಎಫ್ ಮುಖ್ಯ ರಸ್ತೆಯ ಬಂಗಾರಪೇಟೆ ಸರಹದ್ದು ಅನಗಾನಹಳ್ಳಿ ಸಮೀಪದ ಎಸಿ ಎನ್ ಸಿಟಿ ರಸ್ತೆಯ ಎಡಬದಿಯಲ್ಲಿ ದ್ವಿಚಕ್ರ ವಾಹನ ಚಲಾಯಿಸಿಕೊಂಡು ಬರುತ್ತಿದ್ದಾಗ ಕೆಎಸ್ ಆರ್ ಟಿಸಿ ಬಸ್ ಸಂಖ್ಯೆ–ಕೆಎ07–1457 ಬಸ್ ಚಾಲಕ ಅಜಾಗರೂಕತೆಯಿಂದ ಚಲಾಯಿಸಿಕೊಂಡು ಮೇಲೆ ಹೇಳಿದ ದ್ವಿಚಕ್ರ ವಾಹನಕ್ಕೆ ಡಿಕ್ಕಿ ಹೊಡಿದಿದ್ದ ಕಾರಣ ಶೇಕ್ ಅಹಮದ್ ರವರು ಬಸ್ ಕೆಳಕೆ ಸಿಕ್ಕಿ ಬಸ್ ಚಕ್ರ ಮೈ ಮೇಲೆ ಹರಿದು ತಲೆಗೆ ತೀವ್ರ ಸ್ವರೂಪದ ಗಾಯಗಳಾಗಿ ಕೈಗಳು ಮುರಿದು ಸ್ಥಳದಲ್ಲಿ ಮೃತ ಪಟ್ಟಿರುತ್ತಾರೆ ಎಂದರೆ ಸರಿಯಲ್ಲ, ಮೇಲೆ ಹೇಳಿದ ಅಪಘಾತವು ನನ್ನ ಸಮಕ್ಷಮ ಜರುಗಿರುತ್ತದೆ ಎಂದರೆ ಸರಿಯಲ್ಲ, ಸದರಿ ಘಟನೆಗೆ ಸಂಬಂಧಿಸಿದಂತೆ ನಾನು ಈಗ ಓದಿ ಹೇಳಿದಂತೆ ದಿನಾಂಕ 01.01.2023 ರಂದು ನಾನು ಪೋಲೀಸರಿಗೆ ಹೇಳಿಕೆ ಕೊಟ್ಟಿದ್ದೇನೆ ಎಂದರೆ ಸರಿಯಲ್ಲ. ಸಾಕ್ಷಿಯು ಅಲ್ಲಗಳೆದ ಹೇಳಿಕೆಯನ್ನು ನಿ ಪಿ 14 ಎಂದು ಗುರುತಿಸಲಾಯಿತು. ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ**

ಪಾಟೀ ಸವಾಲು ಇರುವುದಿಲ್ಲ ಎಂದು ನಿವೇದಿಸಿಕೊಂಡಿರುತ್ತಾರೆ.

**ಮರು ವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆ ಮೇರೆಗೆ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸರಿ ಇದೆ.

**(ಸುಕೀತಾ ಎಸ್ ಹದ್ಲಿ)**
ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ, ಬಂಗಾರಪೇಟೆ

**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ಬಂಗಾರಪೇಟೆ**

**ಸಿಸಿ ಸಂಖ್ಯೆ:** 685/2023

**ಚಾಸಾಃ 12 ಫ್ರಾಸಾಃ 7**

**ಸಾಕ್ಷಿಯನ್ನು ದಿಃ 04-06-2026 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

| | |
|---|---|
| ಹೆಸರುಃ | ವೆಂಕಟಾಚಲಪತಿ |
| ತಂದೆ ಹೆಸರುಃ | ಮುನಿಯಪ್ಪ |
| ವಯಸ್ಸುಃ | 48 |
| ವೃತ್ತಿಃ | ವ್ಯವಸಾಯ |
| ವಾಸ ಸ್ಥಳಃ | ವಟ್ರಕುಂಟೆ |

**ಮುಖ್ಯ ವಿಚಾರಣೆಃ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

ಚಾಸಾ-11 ರವರ ಪರಿಚಯ ನನಗೆ ಇರುತ್ತದೆ. ಸಾಕ್ಷಿಗೆ ನಿಪಿ-2 ನ್ನು ತೋರಿಸಲಾಗಿ, ಸಾಕ್ಷಿ ಅದನ್ನು ನೋಡಿ ಗುರುತಿಸಲಾಗಿ ಸಾಕ್ಷಿಯ ಸಹಿಯನ್ನು ನಿಪಿ-2(ಸಿ) ಎಂದು ಗುರುತಿಸಲಾಯಿತು. ಸದರಿ ದಾಖಲಾತಿಗೆ ನನ್ನ ಸಹಿಯನ್ನ ಪೊಲೀಸ್ ಠಾಣೆಯಲ್ಲಿ ಎರಡು ವರ್ಷಗಳ ಹಿಂದೆ ಹಾಕಿರುತ್ತೇನೆ, ಅದರಲ್ಲಿ ಏನು ಬರೆದಿದೆ ಹಾಗೂ ಯಾವ ಕಾರಣಕ್ಕೆ ಹಾಕಿರುತ್ತೇನೆ ನನಗೆ ಗೊತ್ತಿಲ್ಲ.

(ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಬೇಕೆಂದು ಎ.ಪಿ.ಪಿ.ರವರು ಕೋರಿರುತ್ತಾರೆ. ಅದರಂತೆ ಅನುಮತಿ ನೀಡಿದೆ.)

**ಪಾಟೀ ಸವಾಲುಃ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

ದಿನಾಂಕ 01-01-2023 ಬಂಗಾರಪೇಟೆ ಪೊಲೀಸರು ನನ್ನ ಹಾಗೂ ಚಾಸಾ-12 ರವರ ಸಮಕ್ಷಮ ಈಗ ಓದಿ ಹೇಳಿರುವಂತೆ ನಿಪಿ-2 ರ ಪ್ರಕಾರ ಘಟನ ಸ್ಥಳದ ಪಂಚನಾಮೆಯನ್ನು ಮಧ್ಯಾಹ್ನ ಸಮಯ ಸುಮಾರು 03-20 ರಿಂದ 04-20 ವರಿಗೂ ಜರುಗಿಸಿ ಸ್ಥಳದಲ್ಲಿ ನಮ್ಮ ಸಹಿ ಪಡೆದುಕೊಂಡಿರುತ್ತಾರೆ ಎಂದರೆ ಸರಿಯಲ್ಲ, ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ</u>**

ಪಾಟೀ ಸವಾಲು ಇರುವುದಿಲ್ಲ ಎಂದು ನಿವೇದಿಸಿಕೊಂಡಿರುತ್ತಾರೆ.

**<u>ಮರು ವಿಚಾರಣೆಃ ಇಲ್ಲ.</u>**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆ ಮೇರೆಗೆ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸರಿ ಇದೆ.

**(ಸುಕೀತಾ ಎಸ್ ಹದ್ಲಿ)**
ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ, ಬಂಗಾರಪೇಟೆ